**Akashvani : Bangalore**
**Regional Bulletin In Kannada**
**01.02.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

**೧. ರೈತರಿಗೆ ನೀಡಲಾಗುವ ಕಿಸಾನ್ ಕ್ರೆಡಿಟ್ ಕಾರ್ಡ್ ಮಿತಿಯನ್ನು ೫ ಲಕ್ಷಕ್ಕೆ ಹೆಚ್ಚಿಸಿದ ಕೇಂದ್ರ ಸರ್ಕಾರ**

**೨. ಇದು ನಿರಾಸದಾಯಕ ಅಯವ್ಯಯ ; ರಾಜ್ಯಕ್ಕೆ ಕೊಡುಗೆ ನೀಡದ ಕೇಂದ್ರದ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ**

**೩. ಸಮುದಾಯ ಆರೋಗ್ಯಾಧಿಕಾರಿಗಳಿಗೆ ವೇತನ ಹೆಚ್ಚಿಸುವ ಭರವಸೆ ನೀಡಿದ ರಾಜ್ಯ ಸರ್ಕಾರ**

**೪. ರಾಜ್ಯದಲ್ಲಿ ಮಾವೋವಾದಿ ಚಟುವಟಿಕೆ ಸಂಪೂರ್ಣ ಅಂತ್ಯ ; ಚಿಕ್ಕಮಗಳೂರಿನಲ್ಲಿ ಮತ್ತೊರ್ವ ನಕ್ಸಲ್ ಶರಣಾಗತಿ**

**೫. ರಾಜ್ಯದಲ್ಲಿ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಹಳೆ ವಿದ್ಯಾರ್ಥಿಗಳು ಕೊಡುಗೆ ನೀಡುವಂತೆ ಶಿಕ್ಷಣ ಸಚಿವ ಮಧುಬಂಗಾರಪ್ಪ ಕರೆ**

**<><*<><>*><>**

ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಸತತ ೮ನೇ ಬಾರಿಗೆ ೨೦೨೫-೨೬ನೇ ಸಾಲಿನ ಅಯವ್ಯಯ ಮಂಡಿಸಿದರು. ಈ ವೇಳೆ ರಾಜ್ಯಗಳಿಗೆ ೫೦ ವರ್ಷಗಳ ಅವಧಿಗೆ ಬಡ್ಡಿರಹಿತವಾಗಿ ೧೫ ಲಕ್ಷ ಕೋಟಿ ನೆರವನ್ನು ಮೂಲ ಸೌಕಯಾಭಿವೃದ್ಧಿಗೆ ನೀಡುವುದಾಗಿ ಘೋಷಿಸಿದ್ದಾರೆ. ಹೊಸ ಯೋಜನೆಗಳಿಗಾಗಿ ೧೦ ಲಕ್ಷ ಕೋಟಿ ಮೀಸಲಿಡಲಾಗಿದೆ ಎಂದಿದ್ದಾರೆ.

ರಕ್ಷಣಾ ಇಲಾಖೆಗೆ ೪.೯೧ ಲಕ್ಷ ಕೋಟಿ

ಗ್ರಾಮೀಣಾಭಿವೃದ್ಧಿ ೨.೬೬ ಲಕ್ಷ ಕೋಟಿ

ಗೃಹ ಇಲಾಖೆ ೨.೩೩ ಲಕ್ಷ ಕೋಟಿ

ಕೃಷಿ ಹಾಗೂ ರೈತರ ಕಲ್ಯಾಣ ೧.೭೧ ಲಕ್ಷ ಕೋಟಿ

ಶಿಕ್ಷಣ ೧.೨೮ ಲಕ್ಷ ಕೋಟಿ

ಆರೋಗ್ಯ ೯೮ ಸಾವಿರದ ೩೧೧ ಕೋಟಿ

ನಗರಾಭಿವೃದ್ಧಿ ೯೬ ಸಾವಿರದ ೭೭೭ ಕೋಟಿ

ಮಾಹಿತಿ ತಂತ್ರಜ್ಞಾನ ೯೫ ಸಾವಿರದ ೨೯೮ ಕೋಟಿ

ವಿಜ್ಞಾನ ಕ್ಷೇತ್ರಕ್ಕೆ ೫೫ ಸಾವಿರದ ೬೭೯ ಕೋಟಿ ಮೀಸಲಿಡಲಾಗಿದೆ.

ತೆರಿಗೆ ವಿನಾಯಿತಿಯನ್ನು ೭ ಲಕ್ಷದಿಂದ ೧೨ ಲಕ್ಷಕ್ಕೆ ಏರಿಸಲಾಗಿದೆ. ೧೨ ಲಕ್ಷದವರೆಗೆ ತೆರಿಗೆ ವಿನಾಯಿತಿ ನೀಡಲಾಗಿದೆ. ಹಿರಿಯ ನಾಗರಿಕರಿಗೆ ನೀಡಲಾಗುವ ವಿನಾಯಿತಿಯನ್ನು ೫೦ಸಾವಿರದಿಂದ ೧ ಲಕ್ಷಕ್ಕೆ ಏರಿಸಲಾಗಿದೆ. ರೈತರಿಗೆ ಮತ್ತಷ್ಟು ಸಾಲವನ್ನು ನೀಡುವ ದೃಷ್ಟಿಯಿಂದ ಕಿಸಾನ್ ಕ್ರೆಡಿಟ್ ಕಾರ್ಡ್ ಮಿತಿಯನ್ನು ೩ ಲಕ್ಷದಿಂದ ೫ ಲಕ್ಷಕ್ಕೆ ಹೆಚ್ಚಿಸಲು ನಿರ್ಧರಿಸಲಾಗಿದೆ. ಕ್ಯಾನ್ಸರ್ ಔಷಧದಲ್ಲಿ ಬೆಲೆಯನ್ನು ಕೇಂದ್ರ ಸರ್ಕಾರ ಇಳಿಕೆಮಾಡಲು ತೀರ್ಮಾನಿಸಿದೆ. ಮೊಬೈಲ್ ಬೆಲೆಯಲ್ಲಿಯೂ ಇಳಿಕೆಯಾಗಿದ್ದು ಸ್ವದೇಶಿ ಬಟ್ಟೆಗಳು, ಚರ್ಮದ ಉತ್ಪನ್ನಗಳು ಹಾಗೂ ಎಲ್ಇಡಿ, ಎಲೆಕ್ಟ್ರಿಕ್ ಕಾರುಗಳ ಬೆಲೆಯಲ್ಲಿ ಇಳಿಕೆಯಾಗಿದೆ. ಸೂಕ್ಷ್ಮ ಮತ್ತು ಸಣ್ಣ ಉದ್ಯಮಗಳಿಗೆ ಹಾಗೂ ನವೋದ್ಯಮಗಳಿಗೆ ನೀಡುತ್ತಿದ್ದ ಸಾಲವನ್ನು ೫ ಕೋಟಿ ರೂಪಾಯಿಗಳಿಂದ ೧೦ ಕೋಟಿ ರೂಪಾಯಿಗಳಿಗೆ ಹೆಚ್ಚಿಸಲಾಗುವುದು. ರಫ್ತುದಾರ ಎಂಎಸ್ಎಂಇಗಳಿಗೆ ೨೦ ಕೋಟಿ ರೂಪಾಯಿಗಳ ಅವಧಿ ಸಾಲಗಳನ್ನು ನೀಡಲಾಗುವುದು" ಎಂದು ನಿರ್ಮಲಾ ಸೀತಾರಾಮನ್ ಘೋಷಿಸಿದ್ದಾರೆ. ಚಿತ್ರದುರ್ಗದ ಉದ್ಯಮಿ ನಾಗರಾಜ್ ಬೇಂದ್ರ ಆಕಾಶವಾಣಿಯೊಂದಿಗೆ ಮಾತನಾಡಿ, ಕೇಂದ್ರ ಬಜೆಟ್ ಅನ್ನು ಸ್ವಾಗತಿಸಿದ್ದಾರೆ.

**<><*<><>*><>**

ಈ ಬಾರಿಯ ಕೇಂದ್ರ ಬಜೆಟ್ ಕರ್ನಾಟಕ ಹಾಗೂ ದೇಶದ ಹಿತದೃಷ್ಟಿಯಿಂದ ಬಹಳ ನಿರಾಶಾದಾಯಕ ಆಯವ್ಯಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮೈಸೂರಿನಲ್ಲಿಂದು ಮಾತನಾಡಿದ ಅವರು, ರಾಜ್ಯದ ಬೇಡಿಕೆಗಳು,

ಬೇಡಿಕೆಗಳಾಗಿಯೇ ಉಳಿದಿದೆ ಎಂದು ಹೇಳಿದ್ದಾರೆ. ಕರ್ನಾಟಕ ತೆರಿಗೆ ಪಾವತಿಯಲ್ಲಿ ದೇಶದಲ್ಲೇ ೨ನೇ ಸ್ಥಾನದಲ್ಲಿದ್ದು, ಬಿಹಾರ ಹಾಗೂ ಆಂಧ್ರಪ್ರದೇಶಕ್ಕೆ ರಾಜಕೀಯ ಕಾರಣಗಳಿಗೆ ಹೆಚ್ಚಿನ ಪಾಲು ನೀಡಲಾಗಿದೆ ಎಂದು ದೂರಿದ್ದಾರೆ. ರಾಯಚೂರಿನಲ್ಲಿ ಏಮ್ಸ್ ಘೋಷಣೆ ಮಾಡಬಹುದು ಎಂಬ ನಿರೀಕ್ಷೆಯಿತ್ತು. ರಾಜ್ಯದ ಬೇಡಿಕೆಗಳನ್ನು ಸಂಪೂರ್ಣವಾಗಿ ತಿರಸ್ಕರಿಸಲಾಗಿದೆ ಎಂದು ಹೇಳಿದ್ದಾರೆ.

**ಧ್ವನಿ : ಸಿದ್ದರಾಮಯ್ಯ**

**<><*<><>*><>**

ಕೇಂದ್ರ ಸರ್ಕಾರದಿಂದ ಈ ಬಾರಿ ಸಮತೋಲನದ ಬಜೆಟ್ ಮಂಡನೆ ಮಾಡಲಾಗಿದೆ ಎಂದು ಬಿಜೆಪಿ ಸಂಸದ ಬಸವರಾಜ ಬೊಮ್ಮಾಯಿ ಸಮರ್ಥಿಸಿಕೊಂಡಿದ್ದಾರೆ. ದೆಹಲಿಯಲ್ಲಿ ಮಾತನಾಡಿದ ಅವರು, ರಾಜ್ಯಕ್ಕೆ ಸುಮಾರು ೬ ಸಾವಿರ ಕೋಟಿ ರೂಪಾಯಿ ಸಿಗಲಿದೆ ಎಂದು ಹೇಳಿದ್ದಾರೆ. ಬಿಜೆಪಿ ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಮಾತನಾಡಿ, ಇದು ವಿಕಸಿತ ಭಾರತ ಕಲ್ಪನೆಗೆ ಪೂರಕವಾದ ಬಜೆಟ್ ಎಂದು ಹೇಳಿದ್ದಾರೆ. ಬಡತನದ ನಿರ್ಮೂಲನೆಗೆ ಕೇಂದ್ರ ಸರ್ಕಾರ ಸೂಕ್ತ ನಿರ್ಧಾರ ಕೈಗೊಂಡಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ಕೋಟಾ ಶ್ರೀನಿವಾಸ ಪೂಜಾರಿ**

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಬಜೆಟ್ ಬಗ್ಗೆ ಹಿರಿಯ ಪತ್ರಕರ್ತೆ ಆಶಾ ಕೃಷ್ಣಸ್ವಾಮಿ ಸಂತಸ ವ್ಯಕ್ತಪಡಿಸಿದ್ದಾರೆ.

**ಧ್ವನಿ : ಆಶಾ ಕೃಷ್ಣಸ್ವಾಮಿ**

ವಿಕಸಿತ ಭಾರತಕ್ಕೆ ಕಾಯಕಲ್ಪ ಕೊಡುವ ಬಜೆಟ್ ಇದು ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಶ್ಲಾಘಿಸಿದ್ದಾರೆ. ಉತ್ತಮ, ಆಶಾದಾಯಕ ಮತ್ತು ಜನಪರ ಬಜೆಟ್‌ನ್ನು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿದ್ದಾರೆ ಎಂದು ಮಂಗಳೂರಿನ ಮೈ ಅಂತರಾತ್ಮ ಸಂಸ್ಥಾಪಕ, ಮ್ಯಾನೇಜ್‌ಮೆಂಟ್ ಕನ್ಸಲ್ಟೆಂಟ್ ವೇಣು ಶರ್ಮ ಅಭಿಪ್ರಾಯಪಟ್ಟಿದ್ದಾರೆ. ಈ ಬಾರಿಯೂ ಬಜೆಟ್‌ನಲ್ಲಿ ರಾಯಚೂರಿಗೆ ಏಮ್ಸ್ ಸಿಗಲಿಲ್ಲ ಎಂದು ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಇದು ನಿರಶಾದಾಯಕ ಬಜೆಟ್ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಮಂಡಿಸಿರುವ ಬಜೆಟ್ ನಿರಾಶಾದಾಯಕವಾಗಿದ್ದು, ಯುವ ಜನತೆ, ಕೃಷಿ ಕ್ಷೇತ್ರವನ್ನು ಕಡೆಗಣಿಸಿ ಚುನಾವಣೆಯನ್ನು ಕೇಂದ್ರೀಕರಿಸಿದ ಬಜೆಟ್ ಆಗಿದೆ

ಎಂದು ಅಬಕಾರಿ ಮತ್ತು ಬಾಗಲಕೋಟೆ ಉಸ್ತುವಾರಿ ಸಚಿವ ಆರ್.ಬಿ ತಿಮ್ಮಾಪೂರ ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆಗೆ ಪ್ರಯತ್ನಿಸಿ, ಆರೋಗ್ಯಕರ ಸಮಾಜ ಕಟ್ಟುವ ಕೆಲಸದಲ್ಲಿ ಸರ್ಕಾರದ ಜೊತೆಗೆ ಸಮುದಾಯ ಆರೋಗ್ಯ ಅಧಿಕಾರಿಗಳೂ ಕೈಜೋಡಿಸಬೇಕೆಂದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಕರ್ನಾಟಕ ರಾಜ್ಯ ಸಮುದಾಯ ಆರೋಗ್ಯ ಗುತ್ತಿಗೆ ನೌಕರರ ಸಂಘ ಆಯೋಜಿಸಿದ್ದ ಸಮುದಾಯ ಆರೋಗ್ಯ ಅಧಿಕಾರಿಗಳ ಸಂರಕ್ಷಣಾ ಸಮಾವೇಶ ಉದ್ಘಾಟಿಸಿ ಮಾತನಾಡಿ ಅವರು ಜನರ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದ್ದಾರೆ. ಸಮುದಾಯದ ಆರೋಗ್ಯ ಸುಧಾರಣೆ ಸರ್ಕಾರ, ಇಲಾಖೆ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ. ಆರೋಗ್ಯಾಧಿಕಾರಿಗಳು ಇಟ್ಟಿರುವ ಬೇಡಿಕೆಗಳನ್ನು ಪರಿಶೀಲಿಸಿ ತೀರ್ಮಾನಿಸಲಾಗುವುದು. ಸಮುದಾಯ ಆರೋಗ್ಯಾಧಿಕಾರಿಗಳಿಗೆ ಬೋನಸ್ ಹಾಗೂ ವೇತನ ಹೆಚ್ಚಳ ಹಾಗೂ ಅಂತರಜಿಲ್ಲಾ ವರ್ಗಾವಣೆ, ಆರೋಗ್ಯ ವಿಮೆ ಯೋಜನೆ ಜಾರಿ ಮಾಡುವ ಭರವಸೆಯನ್ನು ನೀಡಿದ ಮುಖ್ಯಮಂತ್ರಿಗಳು, ಗುತ್ತಿಗೆ ನೌಕರರನ್ನು ಖಾಯಂ ಗೊಳಿಸುವ ಬಗ್ಗೆ ಪರಿಶೀಲಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

<><*<><>*><>

ಜನವರಿ ೮ ರಂದು ಬೆಂಗಳೂರಿನಲ್ಲಿ ಸರ್ಕಾರದ ಮುಂದೆ ಶರಣಾಗತಿಯಾದ ಮುಂಡಗಾರು ಲತಾ ತಂಡದ ಮತ್ತೊರ್ವ ಸದಸ್ಯ ರವೀಂದ್ರ ಇಂದು ಚಿಕ್ಕಮಗಳೂರು ಜಿಲ್ಲಾಡಳಿತದ ಮುಂದೆ ಶರಣಾಗತಿಯಾಗಿದ್ದಾರೆ. ಜಿಲ್ಲಾಧಿಕಾರಿ ಮೀನಾ ನಾಗರಾಜ್, ಪೊಲೀಸ್ ಅಧಿಕ್ಷರಾದ ವಿಕ್ರಂ ಅಮಾಟೆ ಎದುರು ರವೀಂದ್ರ ಸಮಾಜದ ಮುಖ್ಯವಾಹಿಗೆ ಮರಳಿದ್ದು ತಾನು ಸ್ವ ಇಚ್ಛೆಯಿಂದ ಶರಣಾಗತಿಯಾಗಿರುವುದಾಗಿ ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ಮಾತನಾಡಿ ನಕ್ಸಲ್ ರವೀಂದ್ರ ಮೂಲತಃ ಚಿಕ್ಕಮಗಳೂರು ಜಿಲ್ಲೆ ಶೃಂಗೇರಿ ತಾಲೂಕಿನವರಾಗಿದ್ದು ಇವರ ಮೇಲೆ ಕರ್ನಾಟಕ, ತಮಿಳುನಾಡು, ಕೇರಳ ಸೇರಿ ಒಟ್ಟು ೧೭ ಪ್ರಕರಣಗಳಿವೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಸರ್ಕಾರಿ ಶಾಲೆಯಲ್ಲಿ ಓದದೇ ಇದ್ದಿದ್ದರೆ ಸಿದ್ದರಾಮಯ್ಯ ಎರಡು ಬಾರಿ ಮುಖ್ಯಮಂತ್ರಿಗಳಾಗುತ್ತಿರಲ್ಲ ಎಂದು ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ

ತಿಳಿಸಿದ್ದಾರೆ.   ತುಮಕೂರು ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಜಿಲ್ಲೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ನಮ್ಮ ಶಾಲೆ ನಮ್ಮ ಜವಾಬ್ದಾರಿ ಎನ್ನುವುದನ್ನು ಎಲ್ಲರೂ ಅರಿಯಬೇಕಿದೆ ಎಂದು ತಿಳಿಸಿದ್ದಾರೆ. ಸರ್ಕಾರಿ ಶಾಲೆಗಳ ಅಭಿವೃದ್ಧಿಗಾಗಿ ಶಾಲೆಗಳ ನೆರವಿಗೆ ಹಳೆ ವಿದ್ಯಾರ್ಥಿಗಳು ಕೊಡುಗೆ ನೀಡಬೇಕು, ಶಿಕ್ಷಕರು ಸಹ ವೇತನದಲ್ಲಿ ಸ್ವಲ್ಪ ಹಣವನ್ನು ಶಾಲೆಗಳ ಅಭಿವೃದ್ಧಿಗೆ ಮೀಸಲಿಡಬೇಕು ಎಂದು ಸಲಹೆ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**